ಹೋತ, ಹಾಗೂ 7 ನಾಯಿಗಳು ಸೇರಿ ಒಟ್ಟು 241 ಪ್ರಾಣಿಗಳು ಮರಣ ಹೊಂದಿರುತ್ತವೆ

ಆ) ಹಾಗಿದ್ದಲ್ಲಿ, ಈ ಬಗ್ಗೆ ಯಾವ ರೀತಿಯಲ್ಲಿ ಕ್ರಮವನ್ನು ಕೈಗೊಳ್ಳಲಾಗಿದೆ,

ಈ ಅಪಘಾತಕ್ಕೆ ಸಂಬಂಧಿಸಿದಂತೆ, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿಯು ಕ್ರಮಕೈಗೊಂಡು, ಅಪಘಾತದಲ್ಲಿ ಮರಣ ಹೊಂದಿದ ಪ್ರಾಣಿಗಳ ಮಾಲೀಕರುಗಳಿಗೆ ಪರಿಹಾರವನ್ನು ಮಂಜೂರು ಮಾಡಿದೆ ಪ್ರಾಣಿಗಳ ಮಾಲೀಕರಾದ ಶೋರಾಪುರ ತಾಲ್ಲೂಕು, ಶಾಂತಪುರ ಗ್ರಾಮದ ನಿವಾಸಿಗಳಾದ ಶ್ರೀ ನಿಂಗಪ್ಪ, ಶ್ರೀ ಬಿಸತಪ್ಪ, ಶ್ರೀ ದೊಡ್ಡ ಹಣಮಂತಪ್ಪ, ಶ್ರೀ ಬಸಪ್ಪ, ಶ್ರೀ ಬಸಣ್ಣ, ಶ್ರೀ ಶರಣಪ್ಪ ಮತ್ತು ಶ್ರೀ ಚಿದಾನಂದ ಇವರುಗಳಿಗೆ ದಿನಾಂಕ 15 3 2007 ರಂದು 1,11,200/– (ಒಂದು ಲಕ್ಷ ಹನ್ನೊಂದು ಸಾವಿರದ ಇನ್ನೂರು ರೂ ಗಳು) ರೂ ಗಳ ಪರಿಹಾರ ಹಣವನ್ನು ಗುಲ್ಬರ್ಗ ವಿದ್ಯುತ್ ಸರಬರಾಜು ಕಂಪನಿಯು ಮಂಜೂರು ಮಾಡಿರುತ್ತದೆ

ಇ) ಕರ್ನಾಟಕ ರಾಜ್ಯದಲ್ಲಿ ಯಾವುದೇ ಕುರಿಗಳು ವಿದ್ಯುತ್ ಸ್ಪರ್ಶದಿಂದ ಮರಣ ಹೊಂದಿದರೆ, ರಾಜ್ಯ ಸರ್ಕಾರದಿಂದ ಪ್ರತಿ ಕುರಿಗೆ ಕೊಡುವ ಪರಿಹಾರ ಧನವಷ್ಟು?

ರಾಜ್ಯದಲ್ಲಿ ವಿದ್ಯುತ್ ಸ್ಪರ್ಶದಿಂದ ಮರಣ ಹೊಂದಿದ ಕುರಿಗಳಿಗೆ ನೀಡಲಾಗುವ ಪರಿಹಾರ ಧನದ ವಿವರ ಕೆಳಕಂಡಂತಿದೆ

1 ನಾನ್ ಎಕ್ಸ್ಗೆಟಿಕ್ ಬ್ರೀಡ್ – ರೂ 300/– ಗಳು

2 ಎಕ್ಸ್ಗೆಟಿಕ್ ಬ್ರೀಡ್ – ರೂ 500/– ಗಳು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **1138(1419)**

ಸದಸ್ಯರ ಹೆಸರು **ಶ್ರೀ ನಿರಾಣಿ ಮುರಗೇಶ್ ರುದ್ರಪ್ಪ (ಬೀಳಗಿ)**

ಉತ್ತರಿಸುವ ಸಚಿವರು **ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)**

ಅ) ಬಾಗಲಕೋಟೆ ಜಿಲ್ಲೆ ಬೀಳಗಿ ಮತಕ್ಷೇತ್ರಕ್ಕೆ ಮಂಜೂರಾದ 110/33 ಹಾಗೂ 33/11 ಕೆ ವಿ ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರಗಳೆಷ್ಟು,

ಬಾಗಲಕೋಟೆ ಜಿಲ್ಲೆ ಬೀಳಗಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ನಾಲ್ಕು ಹೊಸ 110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರಗಳನ್ನು ಹಾಗೂ ಎರಡು ಹೊಸ 33/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರಗಳನ್ನು ಸ್ಥಾಪಿಸಲು ಮಂಜೂರಾತಿಯನ್ನು ನೀಡಲಾಗಿರುತ್ತದೆ

ಆ) ಇವುಗಳ ಪ್ರಗತಿ ಈಗ ಯಾವ ಹಂತದಲ್ಲಿದೆ,
ಇವುಗಳ ಇತ್ತೀಚಿನ ವಸ್ತುಸ್ಥಿತಿಗಳ ವಿವರಗಳು ಈ ಕೆಳಕಂಡಂತಿರುತ್ತವೆ

ಕ್ರ.ಸಂ	ವಿದ್ಯುತ್ ವಿತರಣಾ ಕೇಂದ್ರದ ಹೆಸರು	ಇತ್ತೀಚಿನ ವಸ್ತುಸ್ಥಿತಿ
1	ಮುಂಡಗನೂರು 110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರ.	110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರದ ಕಾಮಗಾರಿಗಳು ಪೂರ್ಣಗೊಂಡಿರುತ್ತದೆ ಇದಕ್ಕೆ ಸಂಬಂಧಿಸಿದ 110/11 ಕೆ ವಿ ವಿದ್ಯುತ್ ಪ್ರಸರಣ ಮಾರ್ಗದ ಕಾಮಗಾರಿಯು ಪ್ರಗತಿಯಲ್ಲಿದ್ದು, ಸದ್ಯದಲ್ಲೇ ಪೂರ್ಣಗೊಳ್ಳುವ ನಿರೀಕ್ಷೆ ಇದೆ
2	ಸಿರಗುಪ್ಪಿ 110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರ.	ವಿದ್ಯುತ್ ವಿತರಣಾ ಕೇಂದ್ರದ ಮತ್ತು ಇದಕ್ಕೆ ಸಂಬಂಧಿಸಿದ ವಿದ್ಯುತ್ ಪ್ರಸರಣ ಮಾರ್ಗಗಳ ನಿರ್ಮಾಣ ಕಾಮಗಾರಿಗಳನ್ನು ಗುತ್ತಿಗೆದಾರರಿಗೆ ಫೆಬ್ರವರಿ 2007 ರಲ್ಲಿ ವಹಿಸಿಕೊಡಲಾಗಿರುತ್ತದೆ ಶೀಘ್ರದಲ್ಲಿಯೇ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು
3	ಗಿರಿಸಾಗರ 110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರ.	ವಿದ್ಯುತ್ ವಿತರಣಾ ಕೇಂದ್ರದ ಮತ್ತು ಇದಕ್ಕೆ ಸಂಬಂಧಿಸಿದ ವಿದ್ಯುತ್ ಪ್ರಸರಣ ಮಾರ್ಗಗಳ ನಿರ್ಮಾಣ ಕಾಮಗಾರಿಗಳನ್ನು ಗುತ್ತಿಗೆ ಆಧಾರದಲ್ಲಿ ನಿರ್ವಹಿಸಲು ಟೆಂಡರ್ ಗಳನ್ನು ಈಗಾಗಲೇ ಆಹ್ವಾನಿಸಲಾಗಿದ್ದು, ಟೆಂಡರಿಂಗ್ ಪ್ರಕ್ರಿಯೆಗಳು ಪ್ರಗತಿಯಲ್ಲಿದೆ
4	ಮರೆಗುದ್ದಿ 110/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರ.	ವಿದ್ಯುತ್ ವಿತರಣಾ ಕೇಂದ್ರದ ಮತ್ತು ಇದಕ್ಕೆ ಸಂಬಂಧಿಸಿದ ವಿದ್ಯುತ್ ಪ್ರಸರಣ ಮಾರ್ಗಗಳ ನಿರ್ಮಾಣ ಕಾಮಗಾರಿಗಳನ್ನು ಗುತ್ತಿಗೆ ಆಧಾರದಲ್ಲಿ ನಿರ್ವಹಿಸಲು ಟೆಂಡರ್ ಗಳನ್ನು ಈಗಾಗಲೇ ಆಹ್ವಾನಿಸಲಾಗಿದ್ದು, ಟೆಂಡರಿಂಗ್ ಪ್ರಕ್ರಿಯೆಗಳು ಪ್ರಗತಿಯಲ್ಲಿದೆ
5	ಬಿದರಿ 33/11 ಕೆ ವಿ ವಿದ್ಯುತ್ ವಿತರಣಾ	ವಿದ್ಯುತ್ ವಿತರಣಾ ಕೇಂದ್ರದ ನಿರ್ಮಾಣ ಕಾಮಗಾರಿಗಳನ್ನು ಗುತ್ತಿಗೆ ಆಧಾರದಲ್ಲಿ

	ಕೇಂದ್ರ.	ನಿರ್ವಹಿಸಲು ಟೆಂಡರ್ ಗಳನ್ನು ಆಹ್ವಾನಿಸಲಾಗಿದ್ದು, ಟೆಂಡರಿಂಗ್ ಪ್ರಕ್ರಿಯೆ ಪ್ರಗತಿಯಲ್ಲಿದೆ
6	ಸಿದ್ದಾಪೂರ 33/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರ	ಸದರೀ ವಿದ್ಯುತ್ ವಿತರಣಾ ಕೇಂದ್ರವನ್ನು ಸ್ಥಾಪಿಸುವ ಪ್ರಸ್ತಾವನೆಗೆ ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯ ತಾಂತ್ರಿಕ ಸಲಹಾ ಸಮಿತಿಯು ಡಿಸೆಂಬರ್ 2006 ರಲ್ಲಿ ಅನುಮೋದನೆಯನ್ನು ನೀಡಿರುತ್ತದೆ ಈ ವಿದ್ಯುತ್ ವಿತರಣಾ ಕೇಂದ್ರದ ನಿರ್ಮಾಣಕ್ಕೆ ಸಂಬಂಧಿಸಿದ ಕಾಮಗಾರಿಯ ವಿವರವಾದ ಯೋಜನಾ ವರದಿಯನ್ನು ಸಿದ್ಧಪಡಿಸಲಾಗುತ್ತಿದೆ

ಇ) 33/11 ಕೆ ವಿ ಸಾಮರ್ಥ್ಯದ ಎಷ್ಟು ವಿದ್ಯುತ್ ವಿತರಣಾ ಕೇಂದ್ರಗಳನ್ನು 110/33 ಕೆ ವಿ ಸಾಮರ್ಥ್ಯಕ್ಕೆ ಉನ್ನತೀಕರಣಗೊಳಿಸುವ ಯೋಜನೆ ಸರ್ಕಾರದಲ್ಲಿದೆಯೆ,

ಸದರೀ ಮತಕ್ಷೇತ್ರದ ವ್ಯಾಪ್ತಿಯಲ್ಲಿ 33/11 ಕೆ ವಿ ವಿದ್ಯುತ್ ವಿತರಣಾ ಕೇಂದ್ರಗಳನ್ನು 110/33 ಕೆ ವಿ ವಿದ್ಯುತ್ ವಿತರಣಾ ಕೇಂದ್ರಗಳನ್ನಾಗಿ

ಉನ್ನತೀಕರಣಗೊಳಿಸುವ ಯಾವುದೇ ಪ್ರಸ್ತಾವನೆಯು ಸದ್ಯಕ್ಕೆ ಇರುವುದಿಲ್ಲ

ಈ) ಗ್ರಾಮಗಳು ಮತ್ತು ಪುನರ್ವಸತಿ ಕೇಂದ್ರಗಳಲ್ಲಿ ಬಹಳ ವರ್ಷಗಳಿಂದ ಜೋಡಿಸಿ ಈಗ ಹರಿದು ಮುರಿದು ಬೀಳುತ್ತಿರುವ ತಂತಿ–ಕಂಬಗಳನ್ನು ಬದಲಾಯಿಸುವ ಬಗ್ಗೆ ಸರ್ಕಾರದ ಕ್ರಮಗಳೇನು?

ಗ್ರಾಮಗಳು ಮತ್ತು ಪುನರ್ವಸತಿ ಕೇಂದ್ರಗಳಲ್ಲಿರುವ ಹಳೆಯ ಮತ್ತು ಸುಸ್ಥಿತಿಯಲ್ಲಿಲ್ಲದ ವಿದ್ಯುತ್ ತಂತಿ ಮತ್ತು ಕಂಬಗಳನ್ನು ಬದಲಾಯಿಸುವ ಕಾಮಗಾರಿಗಳನ್ನು ವಿದ್ಯುತ್ ಸರಬರಾಜು ಕಂಪನಿಗಳು ಆದ್ಯತೆ ಮೇರೆಗೆ ನಿರ್ವಹಿಸುತ್ತಿವೆ

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ **1144(1302)**
ಸದಸ್ಯರ ಹೆಸರು **ಶ್ರೀ ಪಾಟೀಲ್ ಎಂ ವೈ (ಅಫಜಲಪುರ)**
ಉತ್ತರಿಸುವ ಸಚಿವರು **ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು)**